ಮತ್ತು ವಿಚಾರ ವಿಮರ್ಶೆಯನ್ನು ಏರ್ಪಡಿಸಿದ್ದು ಸಮಾಜ ಸೇವಕರು, ವೈದ್ಯಕೀಯ ವೃತ್ತಿಯವರು ಕಾನೂನು ಪರಿಣಿತರನ್ನು ಕಾರ್ಯಕ್ರಮದಲ್ಲಿ ಆಳವಡಿಸಿಕೊಂಡು ವರದಕ್ಷಿಣೆ ಪಿಡುಗಿನ ಬಗ್ಗೆ ಸಾಮಾಜಿಕ ಅರಿವು ಉಂಟಾಗುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.

7. ಮಹಿಳೆಯರ ಮೇಲಿನ ದೌರ್ಜನ್ಯಗಳಲ್ಲಿ ನ್ಯಾಯಾಲಯವು ಆರೋಪಿಗಳಿಗೆ ಶಿಕ್ಷೆ ವಿಧಿಸಿದ ಬಗ್ಗೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ನೀಡಲಾಗುತ್ತಿದೆ.

8. ವರದಕ್ಷಿಣೆ ಸಾವಿನ ಪ್ರಕರಣಗಳನ್ನು ಘೋರ ಅಪರಾಧವೆಂದು ಪರಿಗಣಿಸಿ ಇಲಾಖೆಯ ಉನ್ನತ ಅಧಿಕಾರಿಗಳ ಅಂದರೆ ಡಿ.ವೈ.ಎಸ್.ಪಿ. ದರ್ಜೆಯ ಅಧಿಕಾರಿಗಳಿಂದ ತನಿಖೆಯನ್ನು ನಡೆಸಲಾಗುತ್ತಿದೆ.

9. ವರದಕ್ಷಿಣೆಯ ಸಮಸ್ಯೆಗಳ ನಿವಾರಣೆಗಾಗಿ ಪೋಲೀಸ್ ಇಲಾಖೆಯ ಅಧಿಕಾರಿಗಳು, ಅಭಿಯೋಜಕರುಗಳು ಮತ್ತು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಆಗಾಗ ಸಭೆ ಸೇರಿ ಚರ್ಚಿಸಿ, ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಸಾರ್ವಜನಿಕ ಸೌಲಭ್ಯಗಳ ಕೊರತೆ.

527 (212): ಗುರುಪಾದಪ್ಪ ನಾಗ್ಮಾರಪಳ್ಳಿ, (ಔರಾದ್)

ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ರಾಜ್ಯ ರಸ್ತೆ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಸಾರ್ವಜನಿಕ ಸೌಲಭ್ಯಗಳು (ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಇತ್ಯಾದಿ) ಹಾಗೂ ಶುಚಿತ್ವದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ:

ಆ. ಹಾಗಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಳ್ಳುವ ಕ್ರಮಗಳೇನು ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

ಅ. ಹೌದು

ಆ. ಎಲ್ಲೆಲ್ಲಿ ಸಾಧ್ಯವೋ ಈ ಸೌಲಭ್ಯವನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. 2.72 ಕೋಟಿ ರೂ.ಗಳ ವೆಚ್ಚದಲ್ಲಿ ಸದರಿ ಆರ್ಥಿಕ ವರ್ಷದಲ್ಲಿ ಪ್ರಮುಖ 50 ಬಸ್ ನಿಲ್ದಾಣಗಳನ್ನು ನವೀಕರಿಸಲು ವಿಶೇಷ ಯೋಜನೆಯನ್ನು ರೂಪಿಸಲಾಗಿದೆ. ಇದೇ ಮಾದರಿಯಲ್ಲಿ ಮಿಕ್ಕುಳಿದ ಬಸ್ ನಿಲ್ದಾಣಗಳ ನವೀಕರಣದ ಕಾರ್ಯಕ್ರಮವನ್ನು ಸಹ 93–94ರ ಸಾಲಿನಲ್ಲಿ ಕೈಗೊಳ್ಳಲಾಗುವುದು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಜಮೀನಿನಲ್ಲಿ ಮನೆಗಳನ್ನು ಕಟ್ಟಿಕೊಂಡಿರುವ ಬಗ್ಗೆ.

528 (168): ಶ್ರೀ ಕೆ. ಲಕ್ಷ್ಮಣ್

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಜಮೀನಿನಲ್ಲಿ ಮನೆಗಳನ್ನು ಕಟ್ಟಿಕೊಂಡಿರುವುದು ನಿಜವೇ ?

ಆ. ಮನೆಗಳನ್ನ ಕಟ್ಟಿಕೊಂಡಿದ್ದರೆ ಎಷ್ಟು ವರ್ಷಗಳಿಂದ ಮನೆಗಳನ್ನು ಕಟ್ಟಿಕೊಂಡಿದ್ದಾರೆ ?